# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.18/ಪಿಆರ್:47:2022-23 ದಿನಾಂಕ:17.09.2022

## ಬಾಗಲಗುಂಟೆ ವಾರ್ಡ್-18 ಸಮಿತಿ ಸಭೆಯ ನಡವಳಿಗಳು

ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.17.09.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.18ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಸುರೇಶ್ ರುದ್ರಪ್ಪ | ಆರೋಗ್ಯ ವೈದ್ಯಾಧಿಕಾರಿಗಳು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ತನಯ್ ಕುಮಾರ್ ಎ | ಸಹಾಯಕ ಅಭಿಯಂತರರು, ದಾಸರಹಳ್ಳಿ |
| 4 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ.ಸದಾಶಿವಯ್ಯ, | ಎಂ.ಇ.ಐ ಬಡಾವಣೆ ನಾಗರೀಕ ಹಿತರಕ್ಷಣಾ ಸಮಿತಿ |
| 6 | ಶ್ರೀ.ಆನಂದ ಜಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.19 ಡಿಫೆನ್ಸ್ ಕಾಲೋನಿ |
| 7 | ಶ್ರೀಮತಿ.ಮಹಾಲಕ್ಷ್ಮಿ | ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 8 | ಶ್ರೀ.ಚಿಕ್ಕಮೂರ್ತಿ | ಅರಣ್ಯ ಇಲಾಖೆ, ಬಿಬಿಎಂಪಿ |
| 9 | ಶ್ರೀ.ಟಿ.ಕೃಷ್ಣಮೂರ್ತಿ | ಕಂದಾಯ ಅಧಿಕಾರಿಗಳು, ಕಂದಾಯ ಇಲಾಖೆ |
| 10 | ಶ್ರೀ.ರಂಗನಾಥ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.18 ಬಾಗಲಗುಂಟೆ |
| 11 | ಶ್ರೀ.ಡಾ॥ಹರ್ಷಿತ್ ಎ.ಕೆ | ಮೆಡಿಕಲ್ ಆಫೀಸರ್, ಬಾಗಲಗುಂಟೆ |
| 12 | ಶ್ರೀ.ಗೋಪಾಲಯ್ಯ ಸಿ. | ಸಹಾಯಕ ಅಭಿಯಂತರರು, ಬೆಸ್ಕಾಂ |
| 13 | ಶ್ರೀ.ಹರೀಶ್ | ಬೀದಿ ದೀಪಗಳ ನಿರ್ವಹಣೆ, ಬಿಬಿಎಂಪಿ |
| 14 | ಶ್ರೀ.ಮಹಾದೇವಯ್ಯ | ತೋಟಗಾರಿಕೆ ಇಲಾಖೆ, ಬಿಬಿಎಂಪಿ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

Scanned with CamScanner

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯ ಎಂ.ಇ.ಐ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಸರಬರಾಜು ವ್ಯವಸ್ಥೆಯಲ್ಲಿ ವ್ಯತ್ಯಯಗಳು ಉಂಟಾಗುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಹೆಚ್ಚಾಗುತ್ತಿರುವುದಾಗಿ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು.

➢ ಒಳಚರಂಡಿ ವ್ಯವಸ್ಥೆಗಾಗಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿರುವುದು ಕಂಡುಬಂದಿರುತ್ತದೆ. ಸದರಿ ವಿಷಯಗಳ ದುರಸ್ಥಿ ಕಾರ್ಯವನ್ನು ತುರ್ತಾಗಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

- **ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಆಧಾರ್ ಕಾರ್ಡ್‌ಗಳನ್ನು ಗುರುತಿನ ಚೀಟಿ (Voter ID) ಗೆ ಲಿಂಕ್ ಮಾಡುವ ಬಗ್ಗೆ ಮನೆಮನೆಗೆ ಹೋಗಿ ಪ್ರಚಾರ ಮಾಡಿ, ಕಾರ್ಯ ಪ್ರವೃತ್ತರಾಗಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಿ, ಅದರಂತೆ ತುರ್ತು ಕ್ರಮವಹಿಸಲು ಕಂದಾಯ ಇಲಾಖೆಗೆ ಸೂಚಿಸಲಾಯಿತು.

ಕ್ರಮ:ಕಂದಾಯ ಇಲಾಖೆ, ಸ.ಕಂ.ಅ, ವಾ–18/ಸದಸ್ಯ ಕಾರ್ಯದರ್ಶಿ

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. 35 ಆಟೋಗಳು 35 ಬ್ಲಾಕ್‌ಗಳಲ್ಲಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

ದಿ.16.10.2022 ರಿಂದ 18.10.2022ರವರೆಗೆ ಬಾಗಲಗುಂಟೆ ಮಾರಮ್ಮ ದೇವಿಯ ಜಾತ್ರೆಯ ಕಾರ್ಯಕ್ರಮವನ್ನು ನಡೆಸಲು ಊರಿನ ಗ್ರಾಮಸ್ಥರು/ಮುಖಂಡರು ತೀರ್ಮಾನಿಸಲಾಗಿದ್ದು, ಸದರಿ ಜಾತ್ರೆಗೆ ಮುಂಜಾಗ್ರತಾ ಕ್ರಮವಾಗಿ ದೇವಸ್ಥಾನದ ಅಕ್ಕಪಕ್ಕದಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ಕೈಗೊಳ್ಳುವುದ ಬಗ್ಗೆ ವಾರ್ಡ್ ಕಮಿಟಿಯ ಸದಸ್ಯರು ಸಭೆಯಲ್ಲಿ ತಿಳಿಸಿದರು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 9191 |
| ಬಿಡುಗಡೆಯಾದ ಪ್ರಕರಣಗಳು | 9028 |
| ಸಕ್ರಿಯ ಪ್ರಕರಣಗಳು | 01 |
| ಮರಣ | 162 ಇರುತ್ತದೆಂದು ತಿಳಿಸಿದರು. |

12 ರಿಂದ 14 ವರ್ಷದ ವಯಸ್ಸಿನ ಮಕ್ಕಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ನಡೆಯುತ್ತಿದ್ದು, ಶೇ.139% ಲಸಿಕೆಯನ್ನು ನೀಡಲಾಗಿದೆ. ಮತ್ತು 2ನೇ ಹಂತದ ಲಸಿಕೆ ಹಾಕುವ ಕಾರ್ಯಕ್ರಮ ಶೇ.49% ನೀಡಲಾಗಿದೆ.

15–18 ವಯಸ್ಸಿನವರಿಗೆ ಒಂದನೇ ಹಂತದ ಲಸಿಕೆ 100% ನೀಡಲಾಗಿರುತ್ತದೆ. ಮತ್ತು 2ನೇ ಹಂತದಲ್ಲಿ 90% ನೀಡಲಾಗಿರುತ್ತದೆ.

Scanned with CamScanner

18ನೇ ವಯಸ್ಸಿನ ಮೇಲ್ಪಟ್ಟವರಿಗೆ 1ನೇ ಹಂತದ ಲಸಿಕೆ ಶೇ.101% ನೀಡಲಾಗಿರುತ್ತದೆ ಹಾಗೂ ಎರಡನೇ ಹಂತದ ಲಸಿಕೆಯನ್ನು ಶೇ.101% ನೀಡಲಾಗಿರುತ್ತದೆ ಹಾಗೂ ಬೂಸ್ಟರ್ ಡೋಸ್ 19% (60 ವಯಸ್ಸಿನ ಮೇಲ್ಪಟ್ಟವರಿಗೆ) ನೀಡಲಾಗಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ಮೋಹನ್ ಗೌರೋಜಿ ರವರು ತಿಳಿಸಿದರು. ಹಾಗೂ ಪಾಲಕರು ಮಕ್ಕಳನ್ನು ಆಸ್ಪತ್ರೆಯ ಹತ್ತಿರ ಕರೆ ತಂದು ಲಸಿಕೆ ಹಾಕಿಸಲು ವಾರ್ಡ್‌ನ ನಿವಾಸಿಗಳಿಗೆ ತಿಳಿಸಲು ವಾರ್ಡ್ ಸಮಿತಿ ಸದಸ್ಯರಿಗೆ ಕೋರಲಾಯಿತು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಇತರೆ ವಿಷಯಗಳ ಬಗ್ಗೆ.**

➢ ಬಿಬಿಎಂಪಿ ಮಾರ್ಷಲ್‌ಗಳು ಕಳಪೆ ಗುಣಮಟ್ಟದ ಪ್ಲಾಸ್ಟಿಕ್ ಬಳಸುತ್ತಿರುವ ಅಂಗಡಿ ಮಾಲೀಕರುಗಳು, ಬೀದಿಬದಿ ವ್ಯಾಪಾರಿಗಳಿಗೆ ಇನ್ನಿತರೆಯವರುಗಳಿಗೆ ದಂಡ ವಿಧಿಸುತ್ತಿರುವುದಾಗಿ ಬಿಬಿಎಂಪಿ ಮಾರ್ಷಲ್‌ಗಳು ತಿಳಿಸಿದರು ಇದನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ವಾನುಮತದಿಂದ ಸಭೆಯಲ್ಲಿ ಸೂಚಿಸಲಾಯಿತು.

➢ ದಿ.16.10.2022 ರಿಂದ 18.10.2022ರವರೆಗೆ ಬಾಗಲಗುಂಟೆ ಮಾರಮ್ಮ ದೇವಿಯ ಜಾತ್ರೆಯ ಕಾರ್ಯಕ್ರಮವನ್ನು ನಡೆಸಲು ಊರಿನ ಗ್ರಾಮಸ್ಥರು/ಮುಖಂಡರು ತೀರ್ಮಾನಿಸಲಾಗಿದ್ದು, ಸದರಿ ಜಾತ್ರೆಗೆ ಮುಂಜಾಗ್ರತಾ ಕ್ರಮವಾಗಿ ಬೀದಿ ದೀಪಗಳ ನಿರ್ವಹಣೆ, ಕುಡಿಯುವ ನೀರಿನ ವ್ಯವಸ್ಥೆ, ತಾತ್ಕಾಲಿಕ ಶೌಚಾಲಯ, ಮತ್ತು ದೇವಸ್ಥಾನದ ಸುತ್ತಮುತ್ತಲಿನ ರಸ್ತೆಬದಿಗಳಲ್ಲಿ ಹಾಗೂ ಚರಂಡಿಗಳಲ್ಲಿ ಇರುವ ಹೂಳನ್ನು ತೆಗೆದು, ಸಾಗಿಸಲು ಜೆ.ಸಿ.ಬಿ ಹಾಗೂ ಟ್ರಾಕ್ಟರ್ ವ್ಯವಸ್ಥೆಯನ್ನು ಮಾಡಲು ಸಭೆಯಲ್ಲಿ ತಿಳಿಸಿದರು.

➢ ಕಂದಾಯ ಇಲಾಖೆಯವರು ಮತದಾರರ ಪರಿಷ್ಕರಣೆ ವಿಷಯದ ಬಗ್ಗೆ ಚರ್ಚಿಸಿದರು.

➢ ಕಲ್ಯಾಣ ಇಲಾಖೆಯಲ್ಲಿ ಒಂಟಿ ಮನೆ ಯೋಜನೆ ಅಡಿಯಲ್ಲಿ ಉಚಿತ ಮನೆಗಳನ್ನು ನಿರ್ಮಿಸಲು ಹೊಸದಾಗಿ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ದಿ.19.09.2022 ರವರೆಗೆ ಅವಕಾಶ ಇರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

ಸ.ಅ ವಾ.18/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ಸಂ.18, ಬಾಗಲಗುಂಟೆ**
**ಮತ್ತು ಆರೋಗ್ಯ ವೈದ್ಯಾಧಿಕಾರಿಗಳು (ದಾ.ವ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.

Scanned with CamScanner